ಹಾಗೂ

(II) ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ಎರಡನೇ ತಿದ್ದುಪಡಿ) ವಿಧೇಯಕ, 2004. (ಅನುಬಂಧ–II)

ಅಧ್ಯಕ್ಷರು : ಮಂಡಿಸಲಾಯಿತು.

5. ಶಾಸನ ರಚನೆ:

(ಅ) ವಿಧೇಯಕ ಮಂಡನೆ:

ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕ, 2004

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಮಹದೇವ್(ಪಶು ಸಂಗೋಪನಾ ಮತ್ತು ಸಕ್ಕರೆ ಸಚಿವರು) : ಮಾನ್ಯ ಅಧ್ಯಕ್ಷರೇ," 2004 ರ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2004ರ ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು" ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಮಹದೇವ್(ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು) : ಮಾನ್ಯ ಅಧ್ಯಕ್ಷರೇ, 2004ರ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ–III)

(ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2004.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ.ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೇ." ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2004 ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ "

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಜಗದೀಶ್ ಶೆಟ್ಟರ್ : ಮಾನ್ಯ ಅಧ್ಯಕ್ಷರೇ, ಮೊದಲು ಆಯವ್ಯಯದ ಮೇಲೆ ಚರ್ಚೆ ಆಗಲಿ.

ಅಧ್ಯಕ್ಷರು : ಸ್ವಲ್ಪ ತಡೆಯಿರಿ. ಬಿಎಸಿ, ಮೀಟಿಂಗ್‌ನಲ್ಲಿ ತೀರ್ಮಾನವಾಗಿದೆ. ಇದು ಅರ್ಧಗಂಟೆಯಲ್ಲಿ ಮುಗಿದುಹೋಗುತ್ತದೆ.

ಶ್ರೀ ಜಗದೀಶ್ ಶೆಟ್ಟರ್ : ಮೊದಲು ಡಿಬೇಟ್ ಆಗಲಿ 5 ಗಂಟೆಗೆ ಬಿಲ್‌ಗಳನ್ನು ತೆಗೆದುಕೊಳ್ಳಿ. ಏಕೆಂದರೆ ಬಿಲ್‌ಗಳನ್ನು ಪಾಸು ಮಾಡುವುದಕ್ಕೆ ನಮ್ಮ ತಕರಾರೇನೂ ಇಲ್ಲ.

ಅಧ್ಯಕ್ಷರು : ಬಿಎಸಿ ಮೀಟಿಂಗ್‌ನಲ್ಲಿ ತೀರ್ಮಾನವಾಗಿದೆ.

ಶ್ರೀ ಜಗದೀಶ್ ಶೆಟ್ಟರ್ : ಬಿಎಸಿ ಮೀಟಿಂಗ್‌ನಲ್ಲಿ ಮಧ್ಯಾಹ್ನದ ಮೇಲೆ ತೆಗೆದುಕೊಳ್ಳುವುದೆಂದು ಆಯಿತು. ಮೊದಲು ಡಿಬೇಟ್ ಆಗಲಿ. ಐದು ಗಂಟೆಗೆ ಎರಡು ಬಿಲ್‌ಗಳನ್ನು ತೆಗೆದುಕೊಂಡು ತಾವು ಪಾಸ್ ಮಾಡಿ. ನಾಳೆ ಒಂದಿಷ್ಟು ತೆಗೆದುಕೊಳ್ಳಿ.

ಅಧ್ಯಕ್ಷರು : ನಾಳೆ ಸಮಯ ಸಿಗುತ್ತದೋ ಇಲ್ಲವೋ ಹೇಳುವುದಕ್ಕಾಗವುದಿಲ್ಲ. ಈಗ ಅವರು ಮೂವ್ ಮಾಡಿಬಿಟ್ಟಿದ್ದಾರೆ. ಒಂದಾದರೂ ಪಾಸ್ ಮಾಡಿಬಿಡೋಣ.

ಶ್ರೀ ಜಗದೀಶ್ ಶೆಟ್ಟರ್ : ಅದೊಂದು ಆದಮೇಲೆ ಆಯವ್ಯಯದ ಮೇಲಿನ ಚರ್ಚೆಯನ್ನು ತೆಗೆದುಕೊಳ್ಳಿ.

ಶ್ರೀ ಎ.ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೇ, ಸೆಕ್ಷನ್ 13ಕ್ಕೆ ಕರ್ನಾಟಕ ಅನುಸೂಚಿತ ಜಾತಿಗಳು ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ ನೇಮಕಾತಿ ಅಧಿನಿಯಮ 13ರಲ್ಲಿ ನಿಯಮಗಳನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ಆದರೆ ನಿಯಮಗಳನ್ನು ಸದನದ ಮುಂದೆ ಮಂಡಿಸಲು ಅವಕಾಶ ಇರಲಿಲ್ಲ. ಆದ್ದರಿಂದ ನಿಯಮಾನುಸಾರ ತಿದ್ದುಪಡಿ ಮಾಡಿದ 30 ದಿನಗಳ ಒಳಗೆ ಅವುಗಳನ್ನು ಸದನದ ಮುಂದೆ ಮಂಡಿಸಬೇಕಾಗಿದೆ. ಹಾಗಾಗಿ ಈ ತಿದ್ದುಪಡಿಯನ್ನು ತಮ್ಮ ಮುಂದೆ ಮಂಡಿಸಿದ್ದೇವೆ. ಇದಕ್ಕೆ ಮಂಜೂರಾತಿಯನ್ನು ಕೊಡಬೇಕಾಗಿ ತಮ್ಮ ಮುಖೇನ ನಾನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2004 ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2

ಅಧ್ಯಕ್ಷರು : ಪ್ರಸ್ತಾವ ಏನೆಂದರೆ " ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " ಪ್ರಥಮ ಖಂಡ ಪೆಸರು ಮತ್ತು ಅವತರಣಿಕೆಗಳು, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವ ಅಂಗೀಕಾರ

ಶ್ರೀ ಎ.ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೇ, ವಿಧಾನಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2004 ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳೂ ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಅಂಗೀಕಾರಕ್ಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ: " ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2004 ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು : ಮಾನ್ಯ ಪಾರ್ಲಿಮೆಂಟರಿ ಮಿನಿಸ್ಟರ್ ಮತ್ತು ನಾವು ಮದ್ಯಾಹ್ನ ಬಿಲ್‌ಗಳನ್ನು ತೆಗೆಯಕೊಳ್ಳಬೇಕೆಂದು ಮಾತನಾಡಿದ್ದೆವು. ಇವರೇನೋ ಬೇರೆ ಸಲಹೆಗಳನ್ನು ಕೊಡುತ್ತಿದ್ದಾರೆ. ಐದು ಗಂಟೆಗೆ ಬಿಲ್‌ಗಳನ್ನು ತೆಗೆಯಕೊಳ್ಳಿ ಎಂದು ಹೇಳುತ್ತಿದ್ದಾರೆ, ಅದಕ್ಕೆ ತಮ್ಮ ಸರ್ಕಾರದ ಅಭಿಪ್ರಾಯವೇನು ?

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಈಗ ಪಶುಸಂಗೋಪನೆಯ ವಿಧೇಯಕ ಒಂದು ಆಗಲಿ.

4.00 ಪಿ.ಎಂ.

II) ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕ. 2004

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) : ಮಾನ್ಯ ಅಧ್ಯಕ್ಷರೆ, " 2004ರ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ," 2004ರ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕವನ್ನು ಪರ್ಯಾಲೋಚಿಸುವುದು "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 65ರವರೆಗೆ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ." ಖಂಡ 2ರಿಂದ 65ರವರೆಗೆ ಎರಡೂ ಸೇರಿದಂತೆ ಈ ವಿಧೇಯಕವು ಅಂಗವಾಗಿರುತ್ತದೆ "